**ಕರ್ನಾಟಕ ಸರ್ಕಾರ**
**ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ**
ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.

ಸಂಖ್ಯೆ:ಕಪಂರಾಆ/ಅಭಿವೃದ್ಧಿ/671/2023/E-1258790 ದಿನಾಂಕ:29.12.2023

**-: ಅಧಿಕೃತ ಜ್ಞಾಪನ: -**

**ವಿಷಯ:** IPGRS ತಂತ್ರಾಂಶದಲ್ಲಿ ದಾಖಲಾದ ಕುಂದುಕೊರತೆ / ಮನವಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವುದನ್ನು ಮೇಲ್ವಿಚಾರಣೆ ಮಾಡಲು **ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer- PGMO)** ಗಳನ್ನು ನೇಮಕಾತಿ ಮಾಡುವ ಕುರಿತು.

**ಉಲ್ಲೇಖ:** 1. ಸುತ್ತೋಲೆ ಸಂಖ್ಯೆ: ಸಿಆಸುಇ 118 ಪಿಆರ್‌ಜೆ 2023, ದಿನಾಂಕ:09.11.2023.
2. ಕರ್ನಾಟಕ ಸರ್ಕಾರದ ಪತ್ರದ ಸಂಖ್ಯೆ:ಗ್ರಾಅಪ 75 ಆರ್‌ಐ 2023 ದಿನಾಂಕ:05.12.2023.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರನ್ವಯ IPGRS ತಂತ್ರಾಂಶದಲ್ಲಿ ದಾಖಲಾದ ಕುಂದುಕೊರತೆ/ಮನವಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವುದನ್ನು ಮೇಲ್ವಿಚಾರಣೆ ಮಾಡಲು ಪ್ರತಿಯೊಂದು ಇಲಾಖೆ/ನಿಗಮ/ಮಂಡಳಿ/ಸ್ವಾಯತ್ತ ಸಂಸ್ಥೆಗಳಲ್ಲಿ ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer- PGMO) ಗಳನ್ನು ನೇಮಕಾತಿ ಮಾಡಲು ಹಾಗೂ ನೇಮಕವಾದಂತಹ PGMO ಗಳ ವರ್ಗಾವಣೆ, ಮುಂಬಡ್ತಿ ಅಥವಾ ವಯೋನಿವೃತ್ತಿ ಹೊಂದಿದಾಗ ಸದರಿ ಜಾಗಕ್ಕೆ ನೇಮಕವಾದ ಅಧಿಕಾರಿಗಳೆ PGMO ಗಳಾಗುತ್ತಾರೆ ಮತ್ತು ಅಧಿಕಾರಿಗಳು ಬದಲಾವಣೆಯಾದ ಮಾಹಿತಿಯನ್ನು ಜಾಲತಾಣದಲ್ಲಿ ಪ್ರದರ್ಶಿಸುವುದು ಮತ್ತು ಯೋಜನಾ ನಿರ್ದೇಶಕರು, IPGRS, ಇ-ಆಡಳಿತ ಕೇಂದ್ರ ಇವರಿಗೂ ಸಹ ಕಳುಹಿಸಿಕೊಡತಕ್ಕದ್ದು ಎಂದು ತಿಳಿಸಲಾಗಿರುತ್ತದೆ.

ಅದರನ್ವಯ ರಾಜ್ಯದ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಈ ಕೆಳಕಂಡಂತೆ ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer- PGMO) ಗಳನ್ನು ನೇಮಕ ಮಾಡಿದೆ.

| **ಕ್ರ.ಸಂ** | **ಹಂತ** | **(Public Grievance Management Officer- PGMO) ಗಳ ವಿವರ** |
|---|---|---|
| 1 | ಜಿಲ್ಲಾ ಪಂಚಾಯಿತಿ | ಉಪಕಾರ್ಯದರ್ಶಿ (ಅಭಿವೃದ್ಧಿ) |
| 2 | ತಾಲ್ಲೂಕು ಪಂಚಾಯಿತಿ | ಸಹಾಯಕ ನಿರ್ದೇಶಕರು (ಪಂ.ರಾಜ್) |
| 3 | ಗ್ರಾಮ ಪಂಚಾಯಿತಿ | ಪಂಚಾಯಿತಿ ಅಭಿವೃದ್ಧಿ ಅಧಿಕಾರಿ. |

ನೇಮಕ ಮಾಡಲಾದ PGMO ಗಳ ವಿವರಗಳನ್ನು ಸಂಬಂಧಿಸಿದ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು.

ಕುಂದುಕೊರತೆ/ಮನವಿಗಳ ವಿಲೇವಾರಿ ಪ್ರಗತಿ ಬಗ್ಗೆ ವಿವಿಧ ಮಟ್ಟದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಚರ್ಚಾ ವಿಷಯವನ್ನಾಗಿ ಸೇರಿಸಿ, ಪ್ರಗತಿ ಪರಿಶೀಲನೆ ಮಾಡುವ ಮೂಲಕ IPGRS ತಂತ್ರಾಂಶದಲ್ಲಿ ದಾಖಲಾದ ಕುಂದುಕೊರತೆ/ಮನವಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡತಕ್ಕದ್ದು.

ಮೇಲ್ಕಂಡಂತೆ ಆಯ್ಕೆ ಮಾಡಲಾದ ಸಾರ್ವಜನಿಕ ಕುಂದುಕೊರತೆ ನಿರ್ವಹಣಾಧಿಕಾರಿ (Public Grievance Management Officer- PGMO) ಗಳು, ತಮ್ಮ ವ್ಯಾಪ್ತಿಯಲ್ಲಿ ಪ್ರತಿ ನಿತ್ಯ IPGRS ತಂತ್ರಾಂಶದಲ್ಲಿ ದಾಖಲಾದ ಕುಂದುಕೊರತೆ/ಮನವಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವುದನ್ನು ಮೇಲ್ವಿಚಾರಣೆ ಮಾಡಿ, ಕುಂದುಕೊರತೆ/ಮನವಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಿ ಕ್ರಮವಹಿಸಲು ಆದೇಶಿಸಿದೆ.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು.

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2. ಯೋಜನಾ ನಿರ್ದೇಶಕರು, IPGRS, ಇ-ಆಡಳಿತ ಕೇಂದ್ರ. ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಉಪಕಾರ್ಯದರ್ಶಿ(ಅಭಿವೃದ್ಧಿ)ಗಳಿಗೆ, ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಸಹಾಯಕ ನಿರ್ದೇಶಕರು(ಪಂ.ರಾಜ್) ಗಳಿಗೆ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಮೂಲಕ.
5. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಮೂಲಕ.
6. ಆಯುಕ್ತಾಲಯದ ವೆಬ್‌ಸೈಟ್ ನಲ್ಲಿ ಪ್ರಕಟಿಸಲು
7. ಶಾಖಾ ರಕ್ಷ ಕಡತ.

ಮಾಹಿತಿಗಾಗಿ,

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಶಾಖೆ.